**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/01/ಅಉಆ/2017-18/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 31.07.2017.

# ಸುತ್ತೋಲೆ

**ವಿಷಯ:** 2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** 1) ದಿನಾಂಕ:23.06.2017ರ ಹಾಗೂ 10.07.2017ರ ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ.
2) ದಿನಾಂಕ:18.07.2017ರ ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ.
3) ಕಡತ ಸಂಖ್ಯೆ: ಕಾಶಿಇ/01/ಅಉಆ/17-18/ನೇ.ವಿ-1ರಲ್ಲಿ ಸರ್ಕಾರ ನೀಡಿರುವ ಆದೇಶ.

******

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿ, ಉಳಿದಿರುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ತೆಗೆದುಕೊಳ್ಳಬೇಕಾದ ಕ್ರಮದ ಬಗ್ಗೆ ಉಲ್ಲೇಖ(1)ರ ಸುತ್ತೋಲೆಯಲ್ಲಿ ಮಾರ್ಗದರ್ಶನವನ್ನು ನೀಡಲಾಗಿತ್ತು. ಅದರಂತೆ ದಿನಾಂಕ:17.07.2017ರ ವರೆಗೆ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿತ್ತು.

ಉಲ್ಲೇಖ (2)ರ ಸುತ್ತೋಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸರ್ಕಾರಿ ಪದವಿ ಕಾಲೇಜುಗಳಿಗೆ ವಿವಿಧ ವಿಷಯಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಸ್ಥಳನಿಯುಕ್ತಿ ಆದೇಶ ನೀಡುವ ಸಂಬಂಧ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿರುವುದರಿಂದ ಖಾಲಿ ಇರುವ ಹುದ್ದೆಗಳಿಗೆ ಖಾಯಂ ಉಪನ್ಯಾಸಕರುಗಳು ವರದಿ ಮಾಡಿಕೊಂಡ ನಂತರ ಕಾಲೇಜುಗಳಲ್ಲಿ ಉಳಿಯುವ ಹೆಚ್ಚುವರಿ ಕಾರ್ಯಭಾರಕ್ಕೆದುರಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಬೇಕಾಗಿರುವುದರಿಂದ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯನ್ನು ಮೂರು ದಿನಗಳ ಕಾಲ ತಾತ್ಕಾಲಿಕವಾಗಿ ತಡೆಹಿಡಿಯಲಾಗಿತ್ತು.

ಈ ಮಧ್ಯೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳು ಅತಿಥಿ ಉಪನ್ಯಾಸಕರ ಆಯ್ಕೆ ಸಂಬಂಧ ಕೆಲವೊಂದು ವಿಷಯದ ಬಗ್ಗೆ ಅಗತ್ಯ ಮಾರ್ಗದರ್ಶನ ನೀಡುವಂತೆ ಕೋರಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಲಾಗಿ, **ಉಲ್ಲೇಖ(3)ರ ಕಡತದಲ್ಲಿ ಸರ್ಕಾರ ನೀಡಿರುವ ಆದೇಶದನ್ವಯ** 2017-18ನೇ ಸಾಲಿನ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯನ್ನು ಈ ಕೆಳಕಂಡ ಮಾರ್ಗದರ್ಶನದನ್ವಯ ದಿನಾಂಕ:03.08.2017 ರಿಂದ ನಡೆಸಲು ಸೂಚಿಸಲಾಗಿದೆ.

1. ಉಲ್ಲೇಖ(1)ರ ಸುತ್ತೋಲೆಯ ಪ್ರಕಾರ ಈಗಾಗಲೇ ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಆಯ್ಕೆಯನ್ನು ರದ್ದುಪಡಿಸಿ, ಹೊಸದಾಗಿ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸಲಾಗಿದೆ.

2. ಸರ್ಕಾರ ನೇಮಕಾತಿ ಆದೇಶ ನೀಡಿರುವ ವಿವಿಧ ವಿಷಯಗಳ ಸಹಾಯಕ ಪ್ರಾಧ್ಯಾಪಕರುಗಳು ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡು, ಮಂಜೂರಾದ ಖಾಲಿ ಹುದ್ದೆ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ಹಾಜರಾಗುವುದರಿಂದ, ಪ್ರಾಂಶುಪಾಲರು ಪ್ರಸ್ತುತ

ತಮ್ಮ ಕಾಲೇಜಿನಲ್ಲಿ ಖಾಲಿ ಇರುವ ಮಂಜೂರಾದ ಹುದ್ದೆಗೆ ಎದುರಾಗಿ ಬೇಕಾಗಿರುವ ಕಾರ್ಯಭಾರವನ್ನು ಕಾಯ್ದಿರಿಸಿ, ಉಳಿಕೆ ಇರುವ ಕಾರ್ಯಭಾರಕ್ಕೆ ಮಾತ್ರ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳುವುದು ಹಾಗೂ ಅತಿಥಿ ಉಪನ್ಯಾಸಕರನ್ನು ಗರಿಷ್ಠ 10 ತಿಂಗಳ ಅವಧಿಗೆ ಮಾತ್ರ ಆಯ್ಕೆ ಮಾಡಿಕೊಳ್ಳುವುದು.

3. 2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅಗತ್ಯವಿರುವ ಅತಿಥಿ ಉಪನ್ಯಾಸಕರುಗಳನ್ನು ಆನ್‌ಲೈನ್ ಮೂಲಕ ಪಡೆದ ಅರ್ಜಿಗಳಲ್ಲಿನ ವಿವರಗಳನ್ನು ಆಧರಿಸಿ, ಈ ಕೆಳಗಿನ ಕೋಷ್ಟಕದಲ್ಲಿ ತಿಳಿಸಿರುವಂತೆ ಪ್ರತಿಭಾ ಪಟ್ಟಿಯನ್ನು (Merit List) ಸಿದ್ಧಪಡಿಸಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವುದು.

| ಕ್ರಮ ಸಂಖ್ಯೆ | ವಿದ್ಯಾರ್ಹತೆ | | ಗರಿಷ್ಠ ಅಂಕಗಳು |
|---|---|---|---|
| ಅ) | ಸಾಮಾನ್ಯ ವಿದ್ಯಾರ್ಹತೆ:<br>ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ, ಎರಡು ವರ್ಷ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 50% ನ್ನು ಗಣನೆಗೆ ತೆಗೆದುಕೊಳ್ಳುವುದು. (ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಅರ್ಧ ಭಾಗವನ್ನು ಅಂದರೆ 30 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು). | - | 50 ಅಂಕಗಳು |
| ಆ) | 1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2) ಎನ್‌ಇಟಿ/ಎಸ್‌ಎಲ್‌ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | - | 15 ಅಂಕಗಳು<br>12 ಅಂಕಗಳು<br>08 ಅಂಕಗಳು |
| ಇ) | ಹಿಂದಿನ ವರ್ಷಗಳಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 05 ವರ್ಷಗಳಿಗೆ, 15 ಅಂಕಗಳು ಮಿತಿಗೊಳಿಸುವುದು (ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು)<br>(ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್‌ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು) | - | 15 ಅಂಕಗಳು |
| | ಒಟ್ಟು | | 100 ಅಂಕಗಳು |
| ಸೂಚನೆ: | ಆಯ್ಕೆ ಹೊಂದುವ ಅಭ್ಯರ್ಥಿಗಳ ವಿದ್ಯಾರ್ಹತೆ ಪ್ರಮಾಣ ಪತ್ರಗಳು ನಕಲಿ ಎಂದು ಕಂಡು ಬಂದಲ್ಲಿ ಅವರ ವಿರುದ್ಧ Criminal case ದಾಖಲಿಸಲು ಕ್ರಮವಹಿಸಲಾಗುವುದು. | | |

4. ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಭ್ಯರ್ಥಿಗಳು M.Phil/Ph.D ಪದವಿಯನ್ನು ದೂರ ಶಿಕ್ಷಣದ ಮೂಲಕ ಪಡೆದಿದ್ದಲ್ಲಿ ಅದನ್ನು ದಿನಾಂಕ: 31.05.2017ರ ಯುಜಿಸಿ ಪ್ರಕಟಣೆ ಸಂಖ್ಯೆ: ಎಫ್ ನಂ.4-1/2016(ಡಿಇಬಿ/111)ರ ಪ್ರಕಾರ ಪರಿಗಣಿಸತಕ್ಕದಲ್ಲ ಹಾಗೂ ನಕಲಿ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.

5. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಸಂಬಂಧಪಟ್ಟ ವಿಷಯದಲ್ಲಿ ಹಾಗೂ ಸರ್ಕಾರ ಅಧಿಸೂಚನೆಯಲ್ಲಿ ತಿಳಿಸಿರುವ ಸಮಾನಾಂತರ ವಿಷಯಗಳನ್ನು ಮಾತ್ರ ಪರಿಗಣಿಸಿ, ಅತಿಥಿ ಉಪನ್ಯಾಸಕರ ಆಯ್ಕೆಯನ್ನು ಮಾಡುವುದು.

6. ಹೊಸ ನೇಮಕಾತಿ/ ವರ್ಗಾವಣೆ/ ನಿಯೋಜನೆ ಹಾಗೂ ಇನ್ನಿತರ ಕಾರಣದಿಂದಾಗಿ ಖಾಯಂ ಉಪನ್ಯಾಸಕರು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದಾಗ ಉಂಟಾಗುವ ಕೊರತೆ ಕಾರ್ಯಭಾರಕ್ಕೆ

ಪ್ರತಿಭಾ ಪಟ್ಟಿಯಲ್ಲಿ (Merit List) ಕಡಿಮೆ ಅಂಕ ಪಡೆದಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ತೆಗೆಯತಕ್ಕದ್ದು.

7. ಮಹಿಳಾ ಅತಿಥಿ ಉಪನ್ಯಾಸಕರು ಪ್ರಸೂತಿ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯಕ್ಕೆ ಗೈರು ಹಾಜರಾದ ಸಂದರ್ಭದಲ್ಲಿ ಅವರ ಕಾರ್ಯವನ್ನು ನಿರ್ವಹಿಸಲು ಬೇರೊಬ್ಬ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿದೆ. ಆದರೆ ಮಹಿಳಾ ಅತಿಥಿ ಉಪನ್ಯಾಸಕರು ಪ್ರಸೂತಿಯಿಂದ ಹಿಂದಿರುಗಿದಲ್ಲಿ ಅವರ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಕೈಬಿಟ್ಟು ಪುನಃ ಅದೇ ಮಹಿಳಾ ಅಭ್ಯರ್ಥಿಯನ್ನೇ ಮುಂದುವರೆಸಿ ಅವರ ಸೇವೆಯನ್ನು ಅದೇ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಬಳಸಿಕೊಳ್ಳಲು ಸೂಚಿಸಲಾಗಿದೆ.

8. ಶೈಕ್ಷಣಿಕ ವರ್ಷದ ಮಧ್ಯೆ ಭಾಗದಲ್ಲಿ ವರ್ಗಾವಣೆ/ನಿಯೋಜನೆ/ವಯೋನಿವೃತ್ತಿ/ಸ್ವಯಂ ನಿವೃತ್ತಿ/ಹೊಸ ನೇಮಕ/ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳೇ ವಿವಿಧ ಕಾರಣಗಳಿಂದ ಕರ್ತವ್ಯದಿಂದ ನಿರ್ಗಮಿಸಿದ್ದಲ್ಲಿ ಹೆಚ್ಚುವರಿ ಕಾರ್ಯಭಾರ ನಿರ್ವಹಿಸಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವವರನ್ನೇ ಅತಿಥಿ ಉಪನ್ಯಾಸಕರಾಗಿ ಆಯ್ಕೆ ಮಾಡಿಕೊಳ್ಳತಕ್ಕದ್ದು. ಒಂದು ವೇಳೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಸೂಕ್ತ ಕಾರಣ ಮತ್ತು ದಾಖಲೆಗಳನ್ನು ಕೇಂದ್ರ ಕಛೇರಿಗೆ ಸಲ್ಲಿಸಿ, ಪ್ರತಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರತ್ಯೇಕವಾಗಿ ಅನುಮೋದನೆ ಪಡೆದು ಅರ್ಹ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1) ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಮಾಹಿತಿಗಾಗಿ:-**

1) ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
3) ಜಂಟಿ ನಿರ್ದೇಶಕರು, ಶೈಕ್ಷಣಿಕ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಕೇಂದ್ರ ಕಛೇರಿಯ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳಿಗೆ-ಮಾಹಿತಿಗಾಗಿ
5) ಮಾಹಿತಿ ಅಧಿಕಾರಿಗಳು ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
6) ಕೇಂದ್ರ ಕಛೇರಿಯ ಸಂಬಂಧಪಟ್ಟ ಎಲ್ಲಾ ವಿಭಾಗಗಳ ಮ್ಯಾನೇಜರ್ ಹಾಗೂ ಅಧೀಕ್ಷಕರುಗಳಿಗೆ-ಮಾಹಿತಿಗಾಗಿ
7) ಕಛೇರಿ ಪ್ರತಿ.